# 10 ವರ್ಷ
# 8 ತಿಂಗಳ ಅವಧಿಯ ಪ್ರಗತಿಯ ಬಗ್ಗೆ
# ಕಿರು ಹೊತ್ತಿಗೆ



DKS For Progress

ಸಮಸ್ತ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಮತದಾರ ಬಂಧುಗಳಿಗೆ ನನ್ನ ನಮಸ್ಕಾರಗಳು.

ನೀವು ನೀಡಿರುವ ಪ್ರೀತಿ, ಅಭಿಮಾನ, ಪ್ರೋತ್ಸಾಹ, ಆಶೀರ್ವಾದದ ಫಲವಾಗಿ ಸತತವಾಗಿ ಮೂರು ಬಾರಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದನಾಗಿ ನಿಮ್ಮ ಸೇವೆ ಮಾಡಿದ್ದೇನೆ. ನನ್ನ ಮೇಲಿರುವ ನಿಮ್ಮ ನಂಬಿಕೆ, ವಿಶ್ವಾಸಕ್ಕೆ ನಾನು ಆಭಾರಿ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಒಡನಾಟ ನನ್ನ ಜೀವನದ ಅತ್ಯಂತ ಪ್ರಮುಖ ಘಟ್ಟ. ರಾಜಕೀಯವಾಗಿ ನನಗೆ ಶಕ್ತಿ ನೀಡಿ, ಒಬ್ಬ ನಾಯಕನನ್ನಾಗಿ ಬೆಳೆಸಿದ ಕೀರ್ತಿ ಕ್ಷೇತ್ರದ ಜನರಿಗೆ ಸಲ್ಲುತ್ತದೆ. ನಿಮ್ಮೆಲ್ಲರ ಆಶೀರ್ವಾದದಿಂದ ಕ್ಷೇತ್ರದಲ್ಲಿ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ಜನಪರ ಆಡಳಿತ ನೀಡಲು ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಅಭಿವೃದ್ಧಿಯಲ್ಲಿ ನನ್ನ ಕ್ಷೇತ್ರ ಹಿಂದೆ ಬೀಳಬಾರದು ಎಂಬ ಧ್ಯೇಯದೊಂದಿಗೆ ಕೃಷಿ, ನೀರಾವರಿ, ರಸ್ತೆ, ಶಿಕ್ಷಣ, ಆರೋಗ್ಯ ಸೇರಿದಂತೆ ಹಲವಾರು ಮೂಲಭೂತ ಸೌಕರ್ಯಗಳನ್ನು ಸುಧಾರಿಸಿ, ಕ್ಷೇತ್ರದ ಪ್ರಗತಿಗಾಗಿ ಹಗಲಿರುಳು ದುಡಿದಿದ್ದೇನೆ.

ಕ್ಷೇತ್ರದ ಅಭಿವೃದ್ಧಿ ಜೊತೆ ಜೊತೆಗೆ ಕರುನಾಡಿನ ಹಿತಾಸಕ್ತಿಗಾಗಿ ಧ್ವನಿಯಾಗಿದ್ದೇನೆ. ತೆರಿಗೆ ವಿಚಾರದಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಆಗಿರುವ ಅನ್ಯಾಯದ ವಿರುದ್ಧ ಲೋಕಸಭೆ ಒಳಗೆ ಮತ್ತು ಹೊರಗೆ ನ್ಯಾಯಕ್ಕಾಗಿ ಹೋರಾಡಿದ್ದೇನೆ. ಪ್ರಾಮಾಣಿಕವಾಗಿ ತೆರಿಗೆ ಕಟ್ಟಿದವರಿಗೆ ಅನ್ಯಾಯ ಆಗಬಾರದು, ಅನುದಾನ ನೀಡುವಲ್ಲಿ ಕೇಂದ್ರದಿಂದ ತಾರತಮ್ಯ ಆಗಬಾರದು. ಅಭಿವೃದ್ಧಿ ದೃಷ್ಟಿಯಿಂದಾಗಿ ಎಲ್ಲಾ ರಾಜ್ಯಗಳಿಗೆ ಸಮಾನ ಆದ್ಯತೆ ಸಿಗಬೇಕು ಎಂಬ ಉದ್ದೇಶದಿಂದ "ನನ್ನ ತೆರಿಗೆ ನನ್ನ ಹಕ್ಕು" ಎಂದು ಕನ್ನಡಿಗರ ಪರವಾಗಿ ಪ್ರತಿಪಾದಿಸಿದ್ದೇನೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಹತ್ತಾರು ಜನಪ್ರಿಯ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿದ್ದೇನೆ. ಸಂಸದರ ನಿಧಿಯನ್ನು ಉತ್ತಮವಾಗಿ ಬಳಸಿಕೊಳ್ಳುವ ಮೂಲಕ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಾಮುಖ್ಯತೆಯನ್ನು ನೀಡಿದ್ದೇನೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ಇಡೀ ದೇಶದಲ್ಲಿಯೇ ಮಾದರಿ ಕ್ಷೇತ್ರವನ್ನಾಗಿಸುವ ಸಂಕಲ್ಪ ಹೊಂದಿದ್ದೇನೆ. ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆಯನ್ನು ತರಲು ಬದ್ಧನಾಗಿದ್ದೇನೆ. ಇದನ್ನು ಸಾಕಾರಗೊಳಿಸಲು ನನಗೆ ನಿಮ್ಮ ಆಶೀರ್ವಾದ ಅತ್ಯಾವಶ್ಯಕ. ಮುಂಬರುವ 2024ರ ಲೋಕಸಭಾ ಚುನಾವಣೆಯಲ್ಲಿ ನಿಮ್ಮ ಮತವನ್ನು ಹಸ್ತದ ಗುರುತಿಗೆ ನೀಡುವ ಮೂಲಕ ಕ್ಷೇತ್ರದ **'ಮನೆ ಮಗನಿಗೆ'** ಆಶೀರ್ವದಿಸಿ, ಬೆಂಬಲಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

ಜೈ ಹಿಂದ್, ಜೈ ಕರ್ನಾಟಕ
ಇಂತಿ ನಿಮ್ಮ ಸೇವಾಕಾಂಕ್ಷಿ,

**ಡಿ.ಕೆ.ಸುರೇಶ್**

# ಸಂಸತ್ತಿನ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ

ಆರೋಗ್ಯಯುಕ್ತ ಸಮಾಜ ನಿರ್ಮಿಸುವ ಉದ್ದೇಶದಿಂದ ದೇಶದಲ್ಲಿ ಪ್ರಥಮವಾಗಿ ಸಾರ್ವಜನಿಕರ ಅನುಕೂಲಕ್ಕಾಗಿ ಕ್ಷೇತ್ರದಾದ್ಯಂತ ಸುಮಾರು 300ಕ್ಕೂ ಹೆಚ್ಚು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದ್ದು, ಪ್ರಸ್ತುತ 5 ರೂಪಾಯಿಗೆ 20 ಲೀಟರ್ ಶುದ್ಧ ಕುಡಿಯುವ ನೀರು ಒದಗಿಸಲಾಗುತ್ತಿದೆ.








ಸಾರ್ವಜನಿಕರ ಅನುಕೂಲಕ್ಕಾಗಿ ರಾಮನಗರ, ಚನ್ನಪಟ್ಟಣ, ಮಾಗಡಿ, ಕುಣಿಗಲ್ ಮತ್ತು ಆನೇಕಲ್ ಟೌನ್ ವ್ಯಾಪ್ತಿಯಲ್ಲಿ ವಿದ್ಯುತ್ ಚಿತಾಗಾರ ನಿರ್ಮಿಸಿ, ಕಾರ್ಯನಿರ್ವಹಣೆಯಲ್ಲಿರುತ್ತವೆ.






» ಪ್ರಯಾಣಿಕರ ಅನುಕೂಲಕ್ಕಾಗಿ ಕ್ಷೇತ್ರದಾದ್ಯಂತ ಸಿ.ಸಿ ಕ್ಯಾಮೆರಾ, ಸೋಲಾರ್ ಪ್ಯಾನೆಲ್ಸ್, ಫೋನ್ ಚಾರ್ಜಿಂಗ್ ಸ್ಟೇಷನ್ಸ್ ಒಳಗೊಂಡಿರುವ 80 ಅತ್ಯಾಧುನಿಕ ವಿಶೇಷ ವಿನ್ಯಾಸದ ಸುಸಜ್ಜಿತ ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗಿದೆ.

» ಸಾರ್ವಜನಿಕರ ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ಷೇತ್ರದಾದ್ಯಂತ ವಿವಿಧ ಭಾಗಗಳಲ್ಲಿ ಅಂಬೇಡ್ಕರ್ ಭವನಗಳನ್ನು ನಿರ್ಮಿಸಲಾಗಿದೆ.

» ರಾಮನಗರದ ಯಾರಬ್‌ನಗರದಲ್ಲಿ ರೈಲ್ವೆ ಕೆಳಸೇತುವೆ ನಿರ್ಮಾಣಕ್ಕೆ ಅನುದಾನ ಒದಗಿಸಲಾಗಿದೆ.



# ಶಿಕ್ಷಣ




» ಚನ್ನಪಟ್ಟಣದ ಕೆಂಗಲ್ ದೇವಸ್ಥಾನದ ಹತ್ತಿರ ಕೇಂದ್ರಿಯ ವಿದ್ಯಾಲಯಕ್ಕೆ 10 ಎಕರೆ ಜಾಗ ಮಂಜೂರು ಮಾಡಿಸಿ, ಕಟ್ಟಡ ನಿರ್ಮಾಣ ಮಾಡಲಾಗಿದ್ದು, 1 ರಿಂದ 10ನೇ ತರಗತಿವರೆಗೆ ಶಾಲೆ ಕಾರ್ಯನಿರ್ವಹಿಸುತ್ತಿದೆ.

» ಕನಕಪುರ ತಾಲ್ಲೂಕಿನ ಬರಡನಹಳ್ಳಿಯಲ್ಲಿ 30 ಎಕರೆ ಜಾಗವನ್ನು ನವೋದಯ ಶಾಲೆ ನಿರ್ಮಾಣಕ್ಕೆ ಮಂಜೂರು ಮಾಡಿಸಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.

» ಕ್ಷೇತ್ರದ ವ್ಯಾಪ್ತಿಯ ವಿವಿಧ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರಥಮ ದರ್ಜೆ ಕಾಲೇಜುಗಳ ಕಟ್ಟಣ ನಿರ್ಮಾಣಕ್ಕೆ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ.








» ಕನಕಪುರ, ರಾಮನಗರ, ಮಾಗಡಿ, ಕುಣಿಗಲ್ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ಮಾಣಕ್ಕೆ ಮಂಜೂರಾತಿ ದೊರಕಿಸಿ ಕೊಡಲಾಗಿದೆ.

» ಕ್ಷೇತ್ರ ವ್ಯಾಪ್ತಿಯ ವಿವಿಧ ಭಾಗಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ.




ಹಾರೋಹಳ್ಳಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕಲ್ ಕಾಲೇಜು ನಿರ್ಮಾಣ ಮಾಡಲಾಗಿದ್ದು, ಕಾರ್ಯನಿರ್ವಹಿಸುತ್ತಿದೆ.





ಸರ್ಕಾರಿ ಶಾಲೆಗಳಲ್ಲಿ 10ನೇ ತರಗತಿವರೆಗೆ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸ್ಮಾರ್ಟ್ ಕ್ಲಾಸ್‌ರೂಮ್ ಅಳವಡಿಸಿ, ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಿ.ಎಸ್.ಆರ್. ಯೋಜನೆಯಡಿ ಸರ್ಕಾರಿ ಮಾದರಿ ಶಾಲೆಗಳನ್ನು ನಿರ್ಮಾಣ ಮಾಡಲು ತಲಾ 10 ಕೋಟಿ ರೂ. ವೆಚ್ಚದಲ್ಲಿ ಪ್ರಸ್ತುತ 20 ಶಾಲೆಗಳ ನಿರ್ಮಾಣಕ್ಕೆ ಖಾಸಗಿ ಕಂಪನಿಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದು, ಮುಂದಿನ ದಿನಗಳಲ್ಲಿ 80 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಾದರಿ ಶಾಲೆಗಳ ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ.





# ಆರೋಗ್ಯ

ರಾಮನಗರ ಜಿಲ್ಲಾ ಕೇಂದ್ರದಲ್ಲಿ 300 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಜಿಲ್ಲಾ ಆಸ್ಪತ್ರೆ ನಿರ್ಮಾಣ ಮಾಡಲಾಗಿದ್ದು, ಕಾರ್ಯನಿರ್ವಹಣೆಯಲ್ಲಿದೆ.








ಕನಕಪುರ ಟೌನ್‌ನಲ್ಲಿ 100 ಹಾಸಿಗೆಗಳ ಸಾಮರ್ಥ್ಯದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಇನ್ಫೋಸಿಸ್ ಫೌಂಡೇಶನ್‌ನ ಸಿ.ಎಸ್.ಆರ್ ಯೋಜನೆಯಡಿ 46 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು, ಇದರೊಂದಿಗೆ ರಾಜ್ಯ ಸರ್ಕಾರದಿಂದ 10 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಅನುದಾನ ಮಂಜೂರು ಮಾಡಿಸಲಾಗಿದೆ.



ರಾಮನಗರದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಹಾಗೂ ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಈ ಹಿಂದೆ ಎದುರಾಗಿದ್ದ ಹಲವಾರು ಅಡೆತಡೆಗಳನ್ನು ಬಗೆಹರಿಸಿ ಕಾಮಗಾರಿಗೆ ಚಾಲನೆ ನೀಡಿದ್ದು, ಪ್ರಗತಿಯಲ್ಲಿರುತ್ತದೆ.

» ಕುಣಿಗಲ್ ಟೌನ್‌ನಲ್ಲಿ 100 ಹಾಸಿಗೆಗಳ ಸಾಮರ್ಥ್ಯದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಇನ್ಫೋಸಿಸ್ ಫೌಂಡೇಶನ್‌ನ ಸಿ.ಎಸ್.ಆರ್. ಯೋಜನೆಯಡಿ ನಿರ್ಮಾಣ ಮಾಡುವ ಕಾರ್ಯ ಪ್ರಗತಿ ಹಂತದಲ್ಲಿದೆ.

» ಕನಕಪುರದಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಮಂಜೂರಾತಿ ದೊರೆತ್ತಿದ್ದು, ಮುಂದಿನ ದಿನಗಳಲ್ಲಿ ಕಾಮಗಾರಿಗೆ ಚಾಲನೆ ನೀಡಲು ಕ್ರಮ ವಹಿಸಲಾಗುತ್ತಿದೆ.

» ಆನೇಕಲ್ ತಾಲ್ಲೂಕಿನ ಬೊಮ್ಮಸಂದ್ರದಲ್ಲಿ 200 ಹಾಸಿಗೆ ಸಾಮರ್ಥ್ಯದ ಇ.ಎಸ್.ಐ. ಆಸ್ಪತ್ರೆ ನಿರ್ಮಾಣಕ್ಕೆ ಮಂಜೂರಾತಿ ದೊರಕಿಸಿ ಕೊಡಲಾಗಿದ್ದು, ಕೇಂದ್ರ ಸರ್ಕಾರ ಅನುದಾನ ಬಿಡುಗಡೆಗೊಳಿಸಿದ ನಂತರ ಕಾಮಗಾರಿಗೆ ಚಾಲನೆ ನೀಡಲಾಗುವುದು.





» ಹಾರೋಹಳ್ಳಿ ಕೈಗಾರಿಕಾ ಪ್ರದೇಶದ ವ್ಯಾಪ್ತಿಯಲ್ಲಿ 200 ಹಾಸಿಗೆ ಸಾಮರ್ಥ್ಯದ ಇ.ಎಸ್.ಐ. ಆಸ್ಪತ್ರೆ ನಿರ್ಮಾಣಕ್ಕೆ ಮಂಜೂರಾತಿ ದೊರಕಿಸಿ ಕೊಡಲಾಗಿದ್ದು, ಕೇಂದ್ರ ಸರ್ಕಾರ ಅನುದಾನ ಬಿಡುಗಡೆಗೊಳಿಸಿದ ನಂತರ ಕಾಮಗಾರಿಗೆ ಚಾಲನೆ ನೀಡಲಾಗುವುದು.

» ಕ್ಷೇತ್ರದ ವಿವಿಧ ಭಾಗದಲ್ಲಿ ಗ್ರಾಮೀಣ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಸಾರ್ವಜನಿಕರಿಗೆ ಅನುಕೂಲ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.



## ಕಂದಾಯ

» ಕುಣಿಗಲ್ ಮತ್ತು ಕನಕಪುರದಲ್ಲಿ ನೂತನ ಕಂದಾಯ ಭವನ (ಮಿನಿ ವಿಧಾನ ಸೌಧ) ನಿರ್ಮಾಣಕ್ಕೆ ಅಗತ್ಯವಿರುವ ಅನುದಾನ ಮಂಜೂರು ಮಾಡಿಸಿ, ಕಟ್ಟಡ ನಿರ್ಮಾಣ ಮಾಡಲಾಗಿದೆ.

» ರಾಮನಗರ ಜಿಲ್ಲೆಯಲ್ಲಿ ಸುಮಾರು 200ಕ್ಕೂ ಹೆಚ್ಚು ಗ್ರಾಮಗಳಲ್ಲಿ ಸ್ಮಶಾನಗಳಿಗೆ ಜಾಗವನ್ನು ಮಂಜೂರು ಮಾಡಿಸಲಾಗಿದೆ.





» ಆನೇಕಲ್, ರಾಜರಾಜೇಶ್ವರಿನಗರ ಹಾಗೂ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿರುವ ನಿವಾಸಿಗಳಿಗೆ 94 ಸಿ ಹಾಗೂ 94 ಸಿಸಿ ಅಡಿಯಲ್ಲಿ ಹಕ್ಕುಪತ್ರಗಳನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ.

» ಸಾರ್ವಜನಿಕರಿಗೆ ಜನಸ್ನೇಹಿ ವ್ಯವಸ್ಥೆ ಕಲ್ಪಿಸಲು ಡಿ.ಕೆ.ಎಸ್. ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕ್ಷೇತ್ರದಲ್ಲಿರುವ ವೃದ್ಧರಿಗೆ, ವಿಧವೆಯರಿಗೆ, ವಿಕಲಚೇತನರಿಗೆ ಹಾಗೂ ಸೌಲಭ್ಯ ವಂಚಿತ ಸುಮಾರು 26,668 ಅರ್ಹರನ್ನು ಗುರುತಿಸಿ ಸರ್ಕಾರಿ ಸೌಲಭ್ಯವನ್ನು ಒದಗಿಸಿ ಕೊಡಲಾಗಿದೆ.





» ಕಂದಾಯ ಇಲಾಖೆಯಲ್ಲಿ ರೈತರಿಗೆ ಆಗುತ್ತಿರುವ ತೊಂದರೆಗಳನ್ನು ಸರಿಪಡಿಸಿ, ಅನುಕೂಲ ಕಲ್ಪಿಸುವ ಉದ್ದೇಶದಿಂದ ರಾಜ್ಯದಲ್ಲಿ ಪ್ರಥಮ ಬಾರಿಗೆ ಪ್ರಾಯೋಗಿಕವಾಗಿ ರಾಮನಗರ ಜಿಲ್ಲೆಯಲ್ಲಿ ಜಮೀನುಗಳ ಪೋಡಿ ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಿದ್ದು, ಪೋಡಿ ದುರಸ್ತಿ ಕಾರ್ಯವು ವೇಗವಾಗಿ ನಡೆಸುವ ಉದ್ದೇಶದೊಂದಿಗೆ ಜಿಲ್ಲೆಯಲ್ಲಿ 60 ಭೂ ಮಾಪಕರ ತಂಡವು ಕಾರ್ಯಾರಂಭಗೊಳಿಸಿದೆ.

» ಮಾಗಡಿ, ಆನೇಕಲ್ ಮತ್ತು ಹಾರೋಹಳ್ಳಿಯಲ್ಲಿ ಕಂದಾಯ ಭವನ ಕಾಮಗಾರಿಯ ನಿರ್ಮಾಣಕ್ಕೆ ಮಂಜೂರಾತಿಗೆ ಕ್ರಮವಹಿಸಲಾಗಿದೆ.

» ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ವ್ಯಕ್ತಿ ಸರ್ಕಾರದ ವಿವಿಧ ಸೌಲಭ್ಯಗಳನ್ನು/ಸೇವೆಗಳನ್ನು ಪಡೆಯಲು ಅನುಕೂಲವಾಗುವಂತೆ ಉಪಕಂದಾಯ ಗ್ರಾಮಗಳನ್ನು ಘೋಷಣೆ ಮಾಡಿ, ಸ್ವಾಮಿತ್ವ ಯೋಜನೆಯಡಿ ಇ-ಸ್ವತ್ತು ವಿತರಣೆಗೆ ಕ್ರಮ ಕೈಗೊಂಡಿದ್ದು, ವಿವಿದ ಹಂತಗಳಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ.

# ಸಹಕಾರ ಕ್ಷೇತ್ರ

ಕೆ.ಎಂ.ಎಫ್ ವತಿಯಿಂದ ಚನ್ನಪಟ್ಟಣದ ಕಣ್ವ ಬಳಿ **'ಮಿಲ್ಕ್ ಪೌಡರ್'** ಘಟಕ ಮಂಜೂರಾತಿ ದೊರಕಿಸಿಕೊಡಲಾಗಿದ್ದು, ಕಾರ್ಯನಿರ್ವಹಿಸುತ್ತಿದೆ.





» ಬಮೂಲ್ ಸಹಯೋಗದೊಂದಿಗೆ ಕನಕಪುರದ ಶಿವನಹಳ್ಳಿಯಲ್ಲಿ **'ಮೆಗಾ ಮಿಲ್ಕ್ ಡೈರಿ'**ಯನ್ನು ಸ್ಥಾಪಿಸಿ, ಕಾರ್ಯನಿರ್ವಹಿಸುತ್ತಿದೆ.

» ಜಿಲ್ಲೆಯ ರೈತರಿಗೆ ಉಪಯುಕ್ತವಾಗುವಂತೆ ಸಾಗಾಣಿಕಾ ವೆಚ್ಚ ಉಳಿತಾಯ ಮಾಡಲು ಹಾಗೂ ಗುಣಮಟ್ಟದ ಹಾಲು ಶೇಖರಣೆಗಾಗಿ ಸುಮಾರು  124 ಬಿಎಂಸಿ ಘಟಕಗಳನ್ನು ಬಮೂಲ್ ವತಿಯಿಂದ ನಿರ್ಮಾಣ ಮಾಡಲು ಕ್ರಮ ವಹಿಸಲಾಗಿದೆ.






» ಸಹಕಾರ ಸಂಘದ ವತಿಯಿಂದ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ವಿತರಿಸಲಾಗುತ್ತಿದ್ದು, ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಕ್ರಮ ಕೈಗೊಳ್ಳಲಾಗಿದೆ.

» ಸ್ತ್ರೀ ಶಕ್ತಿ ಮಹಿಳಾ ಸ್ವಸಹಾಯ ಸಂಘಗಳಿಗೆ 5 ಲಕ್ಷ ರೂ. ವರೆಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ವಿತರಿಸುವ ಮೂಲಕ ಮಹಿಳೆಯರಿಗೆ ಆರ್ಥಿಕವಾಗಿ ಸಬಲೀಕರಣಕ್ಕೆ ಪ್ರೋತ್ಸಾಹ ನೀಡಲಾಗುತ್ತಿದೆ.





# ನೀರಾವರಿ



» ಕನಕಪುರ ಮತ್ತು ರಾಮನಗರ ತಾಲ್ಲೂಕಿನ 27 ಕೆರೆಗಳಿಗೆ ಮೂರು ಹಂತದಲ್ಲಿ ನೀರು ತುಂಬಿಸುವ 155 ಕೋಟಿ ರೂ. ವೆಚ್ಚದ ಸಾತನೂರು-ಕೈಲಾಂಚ ಯೋಜನೆ ಕಾಮಗಾರಿ ಪೂರ್ಣಗೊಂಡಿದ್ದು, ಕಾರ್ಯನಿರ್ವಹಣೆಯಲ್ಲಿದೆ.

» ಚನ್ನಪಟ್ಟಣ ತಾಲ್ಲೂಕಿನ ಕಣ್ವ ಜಲಾಶಯದ ಎಡದಂಡೆ ಮತ್ತು ಬಲದಂಡೆ ನಾಲೆಗಳ ಆಧುನೀಕರಣಕ್ಕೆ ಅನುಮೋದನೆ ದೊರಕಿಸಿದ್ದು, 38 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗಿದೆ.





ಕ್ಷೇತ್ರದ ವಿವಿಧ ಕಡೆಗಳಲ್ಲಿ ನರೇಗಾ ಮತ್ತು ಸಣ್ಣ ನೀರಾವರಿ ಇಲಾಖೆ ವತಿಯಿಂದ ಚೆಕ್ ಡ್ಯಾಂ ಗಳ ನಿರ್ಮಾಣಕ್ಕೆ ಅನುದಾನ ನೀಡಿ, ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ.


ಬೆಂಗಳೂರು ನಗರದ ಕೆ ಮತ್ತು ಸಿ ವ್ಯಾಲಿಯಲ್ಲಿನ ಸಂಸ್ಕರಣಾ ಘಟಕದಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಏತ ನೀರಾವರಿ ಮೂಲಕ ಆನೇಕಲ್ ತಾಲ್ಲೂಕಿನ 67 ಕೆರೆಗಳನ್ನು ಮತ್ತು ಕನಕಪುರ ತಾಲ್ಲೂಕಿನ ರಾಹುತನಹಳ್ಳಿ ಕೆರೆ ಮತ್ತು ಮಾವತ್ತೂರು ಕೆರೆಗಳನ್ನು ತುಂಬಿಸುವ 240 ಕೋಟಿ ರೂ. ವೆಚ್ಚದ ಕಾಮಗಾರಿಗೆ ಅನುಮೋದನೆ ನೀಡಿದ್ದು, ಕಾಮಗಾರಿ ಮುಕ್ತಾಯದ ಹಂತದಲ್ಲಿದೆ.





» ಮಾಗಡಿ ತಾಲ್ಲೂಕಿನ 63 ಮತ್ತು ಕುಣಿಗಲ್ ತಾಲ್ಲೂಕಿನ 17 ಕೆರೆಗಳಿಗೆ ನೀರು ತುಂಬಿಸುವ 450 ಕೋಟಿ ರೂ. ವೆಚ್ಚದ ಶ್ರೀರಂಗ ಏತ ನೀರಾವರಿ ಯೋಜನೆಯ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

» ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ಕುಣಿಗಲ್ ಹಾಗೂ ಮಾಗಡಿ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವ **'ಲಿಂಕ್ ಕ್ಯಾನೆಲ್'** ಕಾಮಗಾರಿಯನ್ನು 986 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.





» ಚನ್ನಪಟ್ಟಣ ತಾಲ್ಲೂಕಿನ ಗರಕಹಳ್ಳಿ ಏತ ನೀರಾವರಿ ಯೋಜನೆಯ ಪುನಶ್ಚೇತನ ಕಾಮಗಾರಿಗೆ 43 ಕೋಟಿ ರೂ. ವೆಚ್ಚದಲ್ಲಿ ಅನುಮತಿ ದೊರಕಿಸಿ ಕೊಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.

» ಸತ್ತೆಗಾಲ ಸಮೀಪದ ಅಣೆಕಟ್ಟೆಯಿಂದ ಇಗ್ಗಲೂರಿನ ಬ್ಯಾರೇಜ್ಗೆ ನೀರು ಹರಿಸಿ, ಬಳಿಕ ನೀರನ್ನು ಏತ ನೀರಾವರಿ ಮೂಲಕ ಕಣ್ವ, ಮಂಚನಬೆಲೆ ಮತ್ತು ವೈ.ಜಿ.ಗುಡ್ಡ ಜಲಾಶಯಗಳಿಗೆ ತುಂಬಿಸಿ ರಾಮನಗರ ಜಿಲ್ಲೆಗೆ ಕುಡಿಯುವ ನೀರನ್ನು ಒದಗಿಸುವ 540 ಕೋಟಿ ರೂ. ವೆಚ್ಚದ ಕಾಮಗಾರಿಗೆ ಅನುಮೋದನೆ ದೊರಕಿಸಿಕೊಡಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

» ರಾಮನಗರದ ಬಿಡದಿ ಹೋಬಳಿ ಮತ್ತು ಹಾರೋಹಳ್ಳಿ ಹೋಬಳಿ ವ್ಯಾಪ್ತಿಯ 147 ಕೆರೆಗಳಿಗೆ ನೀರು ತುಂಬಿಸುವ ಯೋಜನೆ (ವೆಚ್ಚ: 146 ಕೋಟಿ ರೂ.)

» ಕನಕಪುರ ತಾಲ್ಲೂಕಿನ ಉಯ್ಯಂಬಳ್ಳಿ ಹಾಗೂ ದೊಡ್ಡಾಲಹಳ್ಳಿ ಹೋಬಳಿಯ 8 ಗ್ರಾಮಗಳಿಗೆ 70 ಕೋಟಿ ರೂ. ವೆಚ್ಚದ ಸೂಕ್ಷ್ಮ ಹನಿ ನೀರಾವರಿ ಕಾಮಗಾರಿ, ಜಾಕ್ ವೆಲ್ ಕಾಮಗಾರಿ ಪೂರ್ಣಗೊಂಡಿದ್ದು, ಪಂಪ್‌ಹೌಸ್ ಕಾಮಗಾರಿ ಪ್ರಗತಿಯಲ್ಲಿದೆ.

» ಕಾವೇರಿ ನದಿಯಿಂದ ಉಯ್ಯಂಬಳ್ಳಿ ಹಾಗೂ ದೊಡ್ಡಾಲಹಳ್ಳಿ ವ್ಯಾಪ್ತಿಯ 21 ಕೆರೆ ತುಂಬಿಸುವ 108 ಕೋಟಿ ರೂ. ವೆಚ್ಚದ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ.






» ರಾಮನಗರ ತಾಲ್ಲೂಕಿನ ಬೈರಮಂಗಲ ಜಲಾಶಯಕ್ಕೆ ಡೈವರ್ಷನ್ ಕಾಲುವೆ ಮತ್ತು ವಿಯರ್ ನಿರ್ಮಿಸುವ ಯೋಜನೆ (ವೆಚ್ಚ: 110 ಕೋಟಿ ರೂ.)

» ನಾರಾಯಣಪುರ ಕೆರೆ ತುಂಬಿಸುವ ಯೋಜನೆಯಡಿ 27 ಕೋಟಿ ರೂ. ವೆಚ್ಚದಲ್ಲಿ ಅರ್ಕಾವತಿ ನದಿಯಿಂದ ಕನಕಪುರ ತಾಲ್ಲೂಕಿನ ನಾರಾಯಣಪುರ ಹಾಗೂ ಇನ್ನಿತರ 11 ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

» ಕನಕಪುರ ತಾಲ್ಲೂಕಿನ ಗರಳಾಪುರ ಮತ್ತು ಇನ್ನಿತರ 13 ಕೆರೆಗಳಿಗೆ ಅರ್ಕಾವತಿ ಜಲಾಶಯದ ಹಿನ್ನೀರಿನಿಂದ ಎರಡು ಹಂತಗಳಲ್ಲಿ ಏತ ನೀರಾವರಿ ಮೂಲಕ ಕೆರೆಗೆ ನೀರನ್ನು ತುಂಬಿಸುವ 70 ಕೋಟಿ ರೂ. ಯೋಜನೆಯು ಪ್ರಗತಿಯಲ್ಲಿರುತ್ತದೆ.

» ಎಸ್.ಐ.ಎಂ.ಪಿ. (supported irrigation management program) ಅಡಿಯಲ್ಲಿ ಎಡಿಬಿ ಬ್ಯಾಂಕ್ ಸಹಯೋಗದೊಂದಿಗೆ 281 ಕೋಟಿ ರೂ. ವೆಚ್ಚದಲ್ಲಿ ಮಂಚನಬೆಲೆ ಕಾಲುವೆಗಳ ಆಧುನೀಕರಣಕ್ಕೆ ಯೋಜನೆಯನ್ನು ರೂಪಿಸಲಾಗಿರುತ್ತದೆ.



» ರಾಮನಗರ ನಗರಸಭಾ ವ್ಯಾಪ್ತಿಯಲ್ಲಿರುವ ಅರ್ಕಾವತಿ ನದಿಯ ಎಡ ಮತ್ತು ಬಲದಂಡೆಗಳಲ್ಲಿ ವಿಶೇಷ ವಿನ್ಯಾಸದೊಂದಿಗೆ ಮಕ್ಕಳ ಪಾರ್ಕ್, ಉದ್ಯಾನವನ, ಕಾರಂಜಿ, ಪಾದಚಾರಿ ಮಾರ್ಗ ನಿರ್ಮಿಸಿ ಅಭಿವೃದ್ಧಿಪಡಿಸಿ, ಸೌಂದರೀಕರಣಗೊಳಿಸುವ 156 ಕೋಟಿ ರೂ. ವೆಚ್ಚದ ಕಾಮಗಾರಿಗೆ ಮಂಜೂರಾತಿ ದೊರಕಿಸಿಕೊಡಲಾಗಿದೆ.

» ರಾಮನಗರ ತಾಲ್ಲೂಕಿನ ಕಾಳೇಗೌಡನದೊಡ್ಡಿ ಬಳಿ ಅರ್ಕಾವತಿ ನದಿಯಿಂದ ನೀರನ್ನು ಎತ್ತಿ ರಾಮನಗರದ ಬೋಳಪ್ಪನಹಳ್ಳಿ, ಅರೇಹಳ್ಳಿ, ಬಿಳಗುಂಬ ಹಾಗೂ ಇತರೆ ಕೆರೆಗಳನ್ನು 28 ಕೋಟಿ ರೂ. ವೆಚ್ಚದ ಏತ ನೀರಾವರಿ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರು ಮಾಡಿಸಲಾಗಿದ್ದು, ಕಾಮಗಾರಿಯು ಪ್ರಾರಂಭ ಹಂತದಲ್ಲಿರುತ್ತದೆ.





## ನಗರಾಭಿವೃದ್ಧಿ



» ರಾಜರಾಜೇಶ್ವರಿ ನಗರ, ಬೆಂಗಳೂರು ದಕ್ಷಿಣ ಭಾಗದಲ್ಲಿ ಹೆಚ್ಚುವರಿ ಅನುದಾನ ನೀಡಿ ರಸ್ತೆ, ಚರಂಡಿ, ಸೇತುವೆ ನಿರ್ಮಿಸಿ ಸ್ಥಳೀಯರಿಗೆ ಮೂಲಭೂತ ಸೌಕರ್ಯವನ್ನು ಒದಗಿಸುವ ಮೂಲಕ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗಿದೆ.

» ಕ್ಷೇತ್ರದ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಮೂಲಭೂತ ಸೌಕರ್ಯ, ಒಳಚರಂಡಿ ಕಾಮಗಾರಿ ಹಾಗೂ ಕುಡಿಯುವ ನೀರಿನ ಕಾಮಗಾರಿಗಳಿಗೆ ಅನುದಾನ ಒದಗಿಸಿಕೊಡಲಾಗಿದೆ.

» ರಾಮನಗರ ನಗರಸಭೆ ವ್ಯಾಪ್ತಿಯಲ್ಲಿ 125 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ.

» ರಾಮನಗರ ನಗರಸಭೆ, ಚನ್ನಪಟ್ಟಣ ನಗರಸಭೆ ಹಾಗೂ ಬಿಬಿಎಂಪಿ ವ್ಯಾಪ್ತಿಯ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರ, ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 110 ಹಳ್ಳಿಗಳು ಸೇರಿದಂತೆ ಆಗಸ್ಟ್ 15, 2024ರ ಒಳಗೆ ಪ್ರತಿ ದಿನ ಕುಡಿಯಲು ಕಾವೇರಿ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಲು ಯೋಜನೆ ರೂಪಿಸಲಾಗಿದೆ.





» ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಪಟ್ಟಣಗಳಿಗೆ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಪ್ರಸ್ತುತ ಕಾರ್ಯಾಚರಣೆಯಲ್ಲಿರುವ ಮೆಟ್ರೋ ಸಂಪರ್ಕವನ್ನು ಕೆಳಕಂಡ ಪಟ್ಟಣಗಳಿಗೆ ವಿಸ್ತರಿಸಲು ಯೋಜನೆ ರೂಪಿಸಿದ್ದು, ಕಾರ್ಯಸಾಧ್ಯತಾ ವರದಿ ಪಡೆಯಲು ಕ್ರಮವಹಿಸಲಾಗಿದೆ.
- » ಬೊಮ್ಮಸಂದ್ರದಿಂದ ಅತ್ತಿಬೆಲೆವರೆಗೆ.
- » ಗೊಟ್ಟಿಗೆರೆಯಿಂದ ಜಿಗಣಿ ಮಾರ್ಗವಾಗಿ ಆನೇಕಲ್- ಅತ್ತಿಬೆಲೆ-ಸರ್ಜಾಪುರದವರೆಗೆ.
- » ಕನಕಪುರ ರಸ್ತೆಯ ರೇಷ್ಮೆ ಸಂಸ್ಥೆಯಿಂದ -ಹಾರೋಹಳ್ಳಿ ವರೆಗೆ.
- » ಮೈಸೂರು ರಸ್ತೆಯ ಚಲ್ಲಘಟ್ಟದಿಂದ ಬಿಡದಿವರೆಗೆ

» ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ಮಹಾನಗರದಲ್ಲಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ.



# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

( ಕುಡಿಯುವ ನೀರು ಪೂರೈಕೆ ಮತ್ತು ರಸ್ತೆ ನಿರ್ಮಾಣ)

## ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಸಂಸ್ಥೆ (KRWS)

» ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 298 ಗ್ರಾಮಗಳಿಗೆ ಕಾವೇರಿ ಕುಡಿಯುವ ನೀರಿನ ಯೋಜನೆಯ 210 ಕೋಟಿ ರೂ. ವೆಚ್ಚದ ಕಾಮಗಾರಿ ಪ್ರಗತಿಯಲ್ಲಿದ್ದು, ಮುಕ್ತಾಯ ಹಂತದಲ್ಲಿದೆ.

» ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಹಾರೋಹಳ್ಳಿ ತಾಲ್ಲೂಕಿನ 257 ಜನವಸತಿ ಪ್ರದೇಶಗಳಿಗೆ ಹಾಗೂ ಬೆಂಗಳೂರು ದಕ್ಷಿಣ ತಾಲ್ಲೂಕಿನ 77 ಜನವಸತಿಗಳಿಗೆ 385 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರಿನ ಯೋಜನೆ ಕಾಮಗಾರಿ ಮಂಜೂರಾತಿಯಾಗಿ, ಟೆಂಡರ್ ಹಂತದಲ್ಲಿದೆ.

» ನೆಟ್‌ಕಲ್ ಜಲಾಶಯ ಮೂಲದಿಂದ ರಾಮನಗರ ನಗರ ಹಾಗೂ ಮಾರ್ಗಮಧ್ಯದ 8 ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಕಲ್ಪಿಸುವ 456 ಕೋಟಿ ರೂ. ವೆಚ್ಚದ ಕಾಮಗಾರಿಗೆ ಅನುಮೋದನೆ ದೊರಕಿಸಿಕೊಡಲಾಗಿದೆ.









» ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಚನ್ನಪಟ್ಟಣ ತಾಲ್ಲೂಕಿನ 251 ಗ್ರಾಮಗಳಿಗೆ ಕಣ್ವ ಜಲಾಶಯದಿಂದ 300 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರಿನ ಯೋಜನೆಯ ಕಾಮಗಾರಿ ಮಂಜೂರಾತಿ ಹಂತದಲ್ಲಿದೆ.

» ಕುಣಿಗಲ್ ತಾಲ್ಲೂಕಿನಲ್ಲಿ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ 745 ವಸತಿಗಳಿಗೆ ಮಾರ್ಕೋನಹಳ್ಳಿ ಜಲಾಶಯದಿಂದ ಕುಡಿಯುವ ನೀರು ಕಲ್ಪಿಸುವ 465 ಕೋಟಿ ರೂ. ಯೋಜನೆ ಕಾಮಗಾರಿ ಮಂಜೂರಾತಿ ಹಂತದಲ್ಲಿದೆ.







» ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಆನೇಕಲ್ ತಾಲ್ಲೂಕಿನ 288 ಜನವಸತಿ ಪ್ರದೇಶಗಳಿಗೆ ಹಾಗೂ ಅತ್ತಿಬೆಲೆ ಪುರಸಭೆ, ಬೊಮ್ಮಸಂದ್ರ ಪುರಸಭೆ, ಚಂದಾಪುರ ಪುರಸಭೆ, ಹೆಬ್ಬಗೋಡಿ ನಗರಸಭೆಗಳಿಗೆ ನೀರು ಒದಗಿಸುವ ಕಾಮಗಾರಿ ಮಂಜೂರಾತಿಯಾಗಿ, ಹೆಚ್ಚುವರಿ ಅನುದಾನಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. (ಅಂದಾಜು ವೆಚ್ಚ:1210 ಕೋಟಿ ರೂ.)

» ಕ್ಷೇತ್ರದಲ್ಲಿರುವ ಸ್ವಸಹಾಯ ಸಂಘಗಳಿಗೆ, ಮಹಿಳಾ ಗುಂಪುಗಳಿಗೆ ಎನ್.ಆರ್.ಎಲ್.ಎಂ. (National Rural Livelihood Mission) ಯೋಜನೆಯಡಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಸಾಲಸೌಲಭ್ಯಗಳನ್ನು ಹಾಗೂ ಸಹಾಯಧನ ವಿತರಣೆ ಮಾಡಲಾಗಿದೆ.

» ಪ್ರಧಾನ ಮಂತ್ರಿ ಗ್ರಾಮ್ ಸಡಕ್ ಯೋಜನೆ (ಪಿಎಂಜಿಎಸ್‌ವೈ): ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಿಎಂಜಿಎಸ್‌ವೈ ಯೋಜನೆಯಡಿ 50 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಪಡಿಸಲಾಗಿದೆ.

» ರಾಮನಗರ, ಚನ್ನಪಟ್ಟಣ, ಕನಕಪುರ, ಮಾಗಡಿ ಹಾಗೂ ಕುಣಿಗಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮೀಣ ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ವಿಶೇಷ ಅನುದಾನ ಮತ್ತು ನರೇಗಾ ಅನುದಾನದ ಒಗ್ಗೂಡಿಸುವಿಕೆಯೊಂದಿಗೆ ಸುಮಾರು 50 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿಯನ್ನು ಮಂಜೂರಾತಿ ದೊರಕಿಸಿಕೊಟ್ಟು, ಪೂರ್ಣಗೊಳಿಸಲಾಗಿದೆ.





» 2023-24ನೇ ಸಾಲಿನಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಕುಣಿಗಲ್ ವಿಧಾನಸಭಾ ಕ್ಷೇತ್ರಗಳಿಗೆ 55 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿ ಕಾಮಗಾರಿಯನ್ನು ಮಂಜೂರು ಮಾಡಿಸಲಾಗಿದೆ.



# ‘ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ’ (ನರೇಗಾ)




**ನರೇಗಾ ಯೋಜನೆಯನ್ನು ಸಮರ್ಪಕವಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದಕ್ಕೆ ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿ**









‘ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ’ಯಡಿಯಲ್ಲಿ ಕಳೆದ 10 ವರ್ಷಗಳಲ್ಲಿ ಅಂತರ್ಜಲ ವೃದ್ಧಿಗೊಳಿಸುವ ಉದ್ದೇಶದಿಂದ ಸುಮಾರು 3 ಸಾವಿರಕ್ಕೂ ಅಧಿಕ ಚೆಕ್ ಡ್ಯಾಂಗಳ ನಿರ್ಮಾಣ, ಕಲ್ಯಾಣಿಗಳ ಅಭಿವೃದ್ಧಿ, ಕೆರೆಗಳ ಪುನಶ್ಚೇತನ, ಕೃಷಿ ಹೊಂಡಗಳ ನಿರ್ಮಾಣ, ಬದು ನಿರ್ಮಾಣ, ತೋಟಗಾರಿಕಾ ಬೆಳೆಗಳಿಗೆ ಪ್ರೋತ್ಸಾಹ, ಸ್ಮಶಾನಗಳ ಅಭಿವೃದ್ಧಿ, ಶಾಲಾ ಕಾಂಪೌಂಡ್ ನಿರ್ಮಾಣ, ಆಟದ ಮೈದಾನ ಅಭಿವೃದ್ಧಿ, ಗ್ರಾಮೀಣ ಭಾಗದಲ್ಲಿ ಕಾಂಕ್ರಿಟ್ ರಸ್ತೆ ಮತ್ತು ಚರಂಡಿಗಳ ನಿರ್ಮಾಣ, ಶೌಚಾಲಯಗಳ ನಿರ್ಮಾಣ ಸೇರಿದಂತೆ ವಿವಿಧ ವೈಯುಕ್ತಿಕ ಹಾಗೂ ಸಮುದಾಯ ಕಾಮಗಾರಿಗಳನ್ನು ಕೈಗೊಳ್ಳಲು ಉತ್ತೇಜನ ನೀಡಲಾಗಿದ್ದು, ಹೈನುಗಾರಿಕೆಗೆ ಅನುಕೂಲವಾಗುವಂತೆ ಸುಮಾರು 1 ಲಕ್ಷ ದನದ ಕೊಟ್ಟಿಗೆಗಳನ್ನು ನಿರ್ಮಾಣ ಮಾಡಲಾಗಿದ್ದು, ಸಮರ್ಪಕವಾಗಿ ಗ್ರಾಮೀಣಾಭಿವೃದ್ದಿಗೆ ಒತ್ತು ನೀಡಿ, ರೈತರ ಏಳಿಗೆಗೆ ಶ್ರಮಿಸಲಾಗುತ್ತಿದೆ.

# ಇಂಧನ

» ಆನೇಕಲ್, ಕುಣಿಗಲ್, ರಾಮನಗರ ಜಿಲ್ಲೆಯಾದ್ಯಂತ ಪಟ್ಟಣ ಮತ್ತು ಗ್ರಾಮೀಣ ಪ್ರದೇಶದ ಭಾಗದಲ್ಲಿ ಗುಣಮಟ್ಟದ ವಿದ್ಯುತ್ ಪೂರೈಕೆ ಮತ್ತು ನಿರಂತರ ವಿದ್ಯುತ್ ಕಲ್ಪಿಸುವ ದೃಷ್ಟಿಯಿಂದ ಮಾನ್ಯ ಶ್ರೀ ಡಿ.ಕೆ.ಶಿವಕುಮಾರ್ ರವರು ಇಂಧನ ಸಚಿವರಾಗಿದ್ದಾಗ ಕ್ಷೇತ್ರದ ಸುಮಾರು 40 ಪ್ರದೇಶಗಳಲ್ಲಿ 66/11 ಕೆವಿ ಉಪ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ.

» ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ರಾಮನಗರ ಟೌನ್ ವ್ಯಾಪ್ತಿಯ ಕೊತ್ತಿಪುರದಲ್ಲಿ 220/66/11 ಕೆ.ವಿ ವಿದ್ಯುತ್ ಉಪಕೇಂದ್ರದ ಸ್ಥಾಪನೆ ಚಾಲನೆ ನೀಡಿ, ಕಾಮಗಾರಿ ಪೂರ್ಣಗೊಳಿಸಿ, ರಾಮನಗರ ತಾಲ್ಲೂಕಿನ ವಿದ್ಯುತ್ ಸಮಸ್ಯೆಯನ್ನು ಬಗೆಹರಿಸಲಾಗಿದೆ.





» ಚನ್ನಪಟ್ಟಣ ಟೌನ್ ವ್ಯಾಪ್ತಿಯಲ್ಲಿ 66/11 ಕೆ.ವಿ ವಿದ್ಯುತ್ ಉಪಕೇಂದ್ರವನ್ನು 220 ಕೆ.ವಿ ಉಪಕೇಂದ್ರವಾಗಿ ಉನ್ನತೀಕರಣಗೊಳಿಸಿ, ಚನ್ನಪಟ್ಟಣ ತಾಲ್ಲೂಕಿನ ವಿದ್ಯುತ್ ಸಮಸ್ಯೆಯನ್ನು ಬಗೆಹರಿಸಲಾಗಿದೆ.

» ಹಾರೋಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಹೊಸದಾಗಿ 220/66/11 ಕೆ.ವಿ ವಿದ್ಯುತ್ ಉಪಕೇಂದ್ರವನ್ನು ನಿರ್ಮಾಣ ಮಾಡಿ, ಕೈಗಾರಿಕಾ ಪ್ರದೇಶ ಹಾಗೂ ಹಾರೋಹಳ್ಳಿ ತಾಲ್ಲೂಕಿಗೆ ಅನುಕೂಲ ಕಲ್ಪಿಸಲಾಗಿದೆ.



ಕ್ಷೇತ್ರ ವ್ಯಾಪ್ತಿಯ ವಿವಿಧ ಸ್ಥಳಗಳಲ್ಲಿ 140 ಎಂವಿ ಸೋಲಾರ್ ವಿದ್ಯುತ್ ಉತ್ಪಾದಿಸಿ, ವಿದ್ಯುತ್ ಉತ್ಪತ್ತಿಗೆ ಪ್ರಮುಖ ಒತ್ತು ನೀಡಲಾಗಿದೆ.

» ಎಲ್ಲಾ ಗ್ರಾಮಗಳಿಗೆ ದೀನ್ ದಯಾಳ್ ಉಪಾಧ್ಯಾಯ ಯೋಜನೆಯಡಿ ನಿರಂತರ ವಿದ್ಯುತ್ ಪೂರೈಕೆ ಮತ್ತು ಬಡ ಕುಟುಂಬಗಳಿಗೆ ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಿಕೊಡಲಾಗಿದೆ.

» ಶ್ರೀ ಡಿಕೆ ಶಿವಕುಮಾರ್ ಅವರು ಇಂಧನ ಸಚಿವರಾಗಿದ್ದ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ರೈತರ ಕೃಷಿ ಭೂಮಿಗೆ ಅನುಕೂಲವಾಗುವಂತೆ ಪಂಪ್‌ಸೆಟ್‌ಗಳಿಗೆ ಗುಣಮಟ್ಟದ ವಿದ್ಯುತ್ ನೀಡುವ ನಿಟ್ಟಿನಲ್ಲಿ 1,00,000ಕ್ಕೂ ಹೆಚ್ಚು ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಯುಎನ್‌ಐಪಿ ಮತ್ತು ಹೆಚ್‌ವಿಡಿಎಸ್ ಯೋಜನೆಯಡಿ ಅಳವಡಿಕೆ ಮಾಡಲಾಗಿದೆ.





» ಕುಣಿಗಲ್ ತಾಲ್ಲೂಕಿನ ಹುಲಿಯೂರು ದುರ್ಗ ಹೋಬಳಿ ಕೇಂದ್ರದಲ್ಲಿ 400 ಕೆವಿ ಸಾಮರ್ಥ್ಯದ ಕೆಪಿಟಿಸಿಎಲ್ ವಿದ್ಯುತ್ ಪ್ರಸರಣ ಸರಬರಾಜು ಕೇಂದ್ರವನ್ನು 392 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ದೊರಕಿಸಿಕೊಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.

» ಬೆಸ್ಕಾಂನಲ್ಲಿ 5 ವರ್ಷಗಳಿಂದ ಬಾಕಿಯಿದ್ದ ಪ್ರಕರಣಗಳಲ್ಲಿ ಸೂಕ್ತ ಮಾದರಿಯಲ್ಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲು ಮಂಜೂರಾತಿ, ಕಾಮಗಾರಿ ಪ್ರಗತಿಯಲ್ಲಿದೆ.



» ಕುಸುಮ್-ಸಿ ಯೋಜನೆಯಡಿಯಲ್ಲಿ ರೈತರಿಗೆ ಹಗಲಿನ ವೇಳೆಯಲ್ಲಿ ವಿದ್ಯುತ್ ಸರಬರಾಜು ಮಾಡಲು ಸೋಲಾರ್ ಉಪಕೇಂದ್ರಗಳನ್ನು ನಿರ್ಮಿಸಿ, ಸುಮಾರು 160 ಮೆಗಾ ವ್ಯಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನೆ ಮಾಡಲು ಮಂಜೂರಾತಿ ದೊರಕಿಸಿಕೊಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

» ರಾಮನಗರದ ಅರ್ಚಕರಹಳ್ಳಿಯಲ್ಲಿ ಬೆಸ್ಕಾಂ ತಾಂತ್ರಿಕ ಸಿಬ್ಬಂದಿಗಳ ತರಬೇತಿ ಕೇಂದ್ರ ಸ್ಥಾಪನೆ ಮಾಡಲಾಗಿದೆ. ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ.

# ಲೋಕೋಪಯೋಗಿ ಇಲಾಖೆ

(ರಸ್ತೆ ಮತ್ತು ಸೇತುವೆಗಳ ನಿರ್ಮಾಣ)

» ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ರಾಮನಗರ, ಚನ್ನಪಟ್ಟಣ ಮತ್ತು ಬಿಡದಿ ನಗರ ವ್ಯಾಪ್ತಿಯ ಮುಖ್ಯರಸ್ತೆಗಳ ಅಭಿವೃದ್ಧಿಗೆ ಅನುದಾನ ಮಂಜೂರು ಮಾಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

» ಕಗ್ಗಲೀಪುರ, ಹಾರೋಹಳ್ಳಿ ಮತ್ತು ಕನಕಪುರ ನಗರ ವ್ಯಾಪ್ತಿಯ ಮುಖ್ಯರಸ್ತೆ ಅಗಲೀಕರಣ ಮತ್ತು ಅಭಿವೃದ್ಧಿ ಪಡಿಸಲಾಗಿದೆ.

» ಮಾಗಡಿ, ರಾಮನಗರ, ಕನಕಪುರ ಮತ್ತು ಆನೇಕಲ್ ವ್ಯಾಪ್ತಿಯಲ್ಲಿ ಸ್ಯಾಟಲೈಟ್ ಟೌನ್ ರಿಂಗ್ ರೋಡ್ (STRR) ರಸ್ತೆಯ ನಿರ್ಮಾಣಕ್ಕೆ ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ.





» ರಾಮನಗರ, ಚನ್ನಪಟ್ಟಣ, ಕನಕಪುರ, ಮಾಗಡಿ, ಕುಣಿಗಲ್ ಮತ್ತು ಆನೇಕಲ್ ಪಟ್ಟಣ ಪ್ರದೇಶಗಳಲ್ಲಿ ರಸ್ತೆ ಮತ್ತು ಸೇತುವೆಗಳ ನಿರ್ಮಾಣಕ್ಕೆ ಆದ್ಯತೆಯನ್ನು ನೀಡಲಾಗಿದೆ.

» ಬಿಡದಿ, ಹಾರೋಹಳ್ಳಿ, ಜಿಗಣಿ, ಆನೇಕಲ್, ವರ್ತೂರು ಮತ್ತು ವೈಟ್‌ಫೀಲ್ಡ್ ಮೂಲಕ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೆಆರ್‌ಡಿಸಿಎಲ್ ಮೂಲಕ ಅಭಿವೃದ್ಧಿ, ಕಾಮಗಾರಿ ಪ್ರಗತಿಯಲ್ಲಿದೆ.



» ಕೆಶಿಪ್ ವತಿಯಿಂದ ನೈಸ್ ರಸ್ತೆಯಿಂದ ಮಾಗಡಿ, ಹುಲಿಯೂರು ದುರ್ಗಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿ ಅಂತಿಮ ಹಂತದಲ್ಲಿದೆ.

»ಕನಕಪುರ, ಮಾಗಡಿ, ರಾಮನಗರ, ಚನ್ನಪಟ್ಟಣ ತಾಲ್ಲೂಕಿನಲ್ಲಿ ಲೋಕೋಪಯೋಗಿ, ಕೇಂದ್ರ ರಸ್ತೆ ನಿಧಿ (ಸಿಆರ್ ಫ್), ಗ್ರಾಮೀಣಾಭಿವೃದ್ಧಿ ಇಲಾಖೆಯ ವತಿಯಿಂದ 500 ಕೋಟಿ ರೂಪಾಯಿಗೂ ಅಧಿಕ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ.





» 2023-24ನೇ ಸಾಲಿನಲ್ಲಿ ಸುಮಾರು ರೂ.16 ಕೋಟಿ ವೆಚ್ಚದಲ್ಲಿ ಆನೇಕಲ್ ಮತ್ತು ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮುಖ್ಯ ರಸ್ತೆಗಳ ಅಭಿವೃದ್ಧಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ.

» ಆನೇಕಲ್ ವ್ಯಾಪ್ತಿಯಲ್ಲಿರುವ ತಮಿಳುನಾಡು ಗಡಿಭಾಗದ (ಮಾರನಾಯಕನಹಳ್ಳಿ) ರಸ್ತೆ ಅಭಿವೃದ್ಧಿಗೆ ರೂ.5.40 ಕೋಟಿ ವೆಚ್ಚದಲ್ಲಿ ಮಂಜೂರಾತಿ ದೊರಕಿಸಿಕೊಡಲಾಗಿದೆ.



» ಮಾಗಡಿ ವಿಧಾನಸಭಾ ಕ್ಷೇತ್ರದ ಪುರಸಭೆ ವ್ಯಾಪ್ತಿಯಲ್ಲಿ ನೂತನ ಆಡಿಟೋರಿಯಂ ನಿರ್ಮಾಣಕ್ಕೆ ರೂ.7 ಕೋಟಿ ಅನುದಾನ ಒದಗಿಸಿ, ಆಡಳಿತಾತ್ಮಕ ಅನುಮೋದನೆ ದೊರೆಕಿಸಿಕೊಡಲಾಗಿದೆ.

» ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲಾ ಮತ್ತು ರಾಜ್ಯ ಹೆದ್ದಾರಿ ರಸ್ತೆಗಳ ಅಗಲೀಕರಣ ಕಾಮಗಾರಿಯ ಭೂಸ್ವಾದೀನಕ್ಕೆ ಅಂದಾಜು ರೂ.30 ಕೋಟಿ ಅನುದಾನ ದೊರೆಕಿಸಿಕೊಡಲಾಗಿದೆ.

## ಸಾರಿಗೆ



» ಶಕ್ತಿ ಯೋಜನೆಯಡಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುತ್ತಿರುವ ಕಾರಣಕ್ಕೆ ಕ್ಷೇತ್ರದಾದ್ಯಂತ ಹೆಚ್ಚುವರಿ ನೂತನ ಅಶ್ವಮೇಧ ಬಸ್‌ಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

» ಚನ್ನಪಟ್ಟಣ ತಾಲ್ಲೂಕಿನ ಕೋಡಂಬಳ್ಳಿ ಮತ್ತು ಕನಕಪುರ ತಾಲ್ಲೂಕಿನ ಕೋಡಿಹಳ್ಳಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ನಿರ್ಮಿಸಲಾಗಿದೆ.



» ಕನಕಪುರ ಟೌನ್‌ನಲ್ಲಿ ಸುಸಜ್ಜಿತ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಮತ್ತು ವಾಣಿಜ್ಯ ಸಂಕೀರ್ಣ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ.

» ಪ್ರಯಾಣಿಕರ ಅನುಕೂಲಕ್ಕಾಗಿ ಹುಲಿಯೂರು ದುರ್ಗ ಪಟ್ಟಣದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ನಿರ್ಮಿಸಲಾಗಿದೆ.





» ಕುಣಿಗಲ್ ಪಟ್ಟಣದಲ್ಲಿ ಖಾಸಗಿ ಬಸ್ ನಿಲ್ದಾಣಕ್ಕೆ ಅನುದಾನ ಮಂಜೂರಾತಿ ದೊರಕಿಸಿ, ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ.

» ಡಿ.ಕೆ.ಎಸ್. ಚಾರಿಟೇಬಲ್ ಟ್ರಸ್ಟ್‌ನ ಮುಖಾಂತರ ಆರ್ಥಿಕವಾಗಿ ಹಿಂದುಳಿದವರಿಗೆ ಅನುಕೂಲವಾಗುವಂತೆ ಚಾಲನಾ ತರಬೇತಿ ನೀಡಿ, ಸುಮಾರು 25 ಸಾವಿರಕ್ಕೂ ಹೆಚ್ಚು ಜನರಿಗೆ ಚಾಲನಾ ಪರವಾನಗಿ ವಿತರಿಸಲು ಕ್ರಮ ವಹಿಸಲಾಗಿದೆ.

# ಪ್ರವಾಸೋದ್ಯಮ

» ಕುಣಿಗಲ್ ತಾಲ್ಲೂಕಿನ ಹುತ್ತರಿದುರ್ಗ ಬೆಟ್ಟವನ್ನು ಅಭಿವೃದ್ಧಿ ಪಡಿಸಲು ಅಂದಾಜು ಎರಡೂವರೆ ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ.

» ಕನಕಪುರ ತಾಲ್ಲೂಕಿನ ಕಬ್ಬಾಳು ಗ್ರಾಮದ ಶ್ರೀ ಕಬ್ಬಾಳಮ್ಮ ದೇವಸ್ಥಾನವನ್ನು ಸಂಪೂರ್ಣ ಅಭಿವೃದ್ಧಿಪಡಿಸಿ, ಪ್ರಮುಖ ಧಾರ್ಮಿಕ ಪ್ರವಾಸಿ ತಾಣವನ್ನಾಗಿಸಲಾಗಿದೆ.





» ನಾಡಪ್ರಭು ಕೆಂಪೇಗೌಡರವರ ಸಮಾಧಿ ಸ್ಥಳವಾದ ಮಾಗಡಿ ತಾಲ್ಲೂಕಿನ ಕೆಂಪಾಪುರ ಗ್ರಾಮವನ್ನು ಅಭಿವೃದ್ಧಿಗೊಳಿಸಲು 25 ಕೋಟಿ ರೂ. ಅನುದಾನ ಮಂಜೂರು ಮಾಡಿಸಲಾಗಿದೆ.

» ನಾಡಪ್ರಭು ಕೆಂಪೇಗೌಡರು ನಿರ್ಮಿಸಿದ ಮಾಗಡಿ ಕೋಟೆ ಅಭಿವೃದ್ಧಿಗೆ 20 ಕೋಟಿ ರೂ. ಅನುದಾನ ಒದಗಿಸಲಾಗಿದೆ.



» ತುಮಕೂರಿನ ಸಿದ್ದಗಂಗಾ ಮಠದ ಲಿಂಗೈಕ್ಯ ಡಾ|| ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜನ್ಮ ಸ್ಥಳವಾದ ಮಾಗಡಿ ತಾಲ್ಲೂಕಿನ ವೀರಾಪುರ ಗ್ರಾಮದ ಸಮಗ್ರ ಅಭಿವೃದ್ಧಿಗೆ 25 ಕೋಟಿ ರೂ. ಅನುದಾನ ಒದಗಿಸಲಾಗಿದೆ.

» ಶ್ರೀ ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾಗಿದ್ದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರ ಜನ್ಮಸ್ಥಳವಾದ ಬಿಡದಿ ಹೋಬಳಿಯ ಬಾನಂದೂರು ಗ್ರಾಮದ ಸಮಗ್ರ ಅಭಿವೃದ್ಧಿಗೆ 25 ಕೋಟಿ ರೂ. ಅನುದಾನ ಒದಗಿಸಲಾಗಿದೆ.

» ಕನಕಪುರದ ಸಂಗಮ, ಏಳಗಳ್ಳಿ ಮತ್ತು ಮರಳೆಬೇಕುಪ್ಪೆ ಗ್ರಾಮದಲ್ಲಿ **'ಯಾತ್ರಿ ನಿವಾಸ'** ನಿರ್ಮಾಣಕ್ಕೆ ಮಂಜೂರಾತಿ ಕಲ್ಪಿಸಿ ಕೊಡಲಾಗಿದೆ.



# ವಸತಿ









» ಕ್ಷೇತ್ರದ ಗ್ರಾಮೀಣ ಮತ್ತು ನಗರ ಪ್ರದೇಶದ ಜನತೆಗೆ 'ಪ್ರಧಾನಮಂತ್ರಿ ಆವಾಸ್ ಯೋಜನೆ', 'ಬಸವ ವಸತಿ ಯೋಜನೆ', 'ಅಂಬೇಡ್ಕರ್ ವಸತಿ' ಯೋಜನೆಯಡಿಯಲ್ಲಿ 15,000 ಕ್ಕೂ ಹೆಚ್ಚು ಮನೆಗಳನ್ನು ಮಂಜೂರಾತಿ ಮಾಡಿಸಿ ಆರ್ಥಿಕವಾಗಿ ಹಿಂದುಳಿದವರಿಗೆ ವಸತಿ ಕಲ್ಪಿಸಲಾಗಿದೆ.

» ಸರ್ಕಾರಿ ಜಮೀನನ್ನು ಕ್ರೋಢಿಕರಿಸಿ ರಾಮನಗರ, ಮಾಗಡಿ ಮತ್ತು ಕುಣಿಗಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ವಿಧಾನಸಭಾ ಕ್ಷೇತ್ರವಾರು ಸುಮಾರು 10,000 ಕ್ಕೂ ಹೆಚ್ಚು ಉಚಿತ ನಿವೇಶನ ನೀಡಲು ಭೂ ಮಂಜೂರಾತಿಗೆ ಕ್ರಮ ವಹಿಸಲಾಗಿದೆ.



» ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ ಹಾಗೂ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೊಳಗೇರಿ ಅಭಿವೃದ್ಧಿ ಮಂಡಳಿಯ ವತಿಯಿಂದ ನಿರ್ಮಿಸಿರುವ ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ಹಂಚಿಕೆ ಮಾಡಿ ಡಿಸೆಂಬರ್-2024 ರೊಳಗೆ ಹಕ್ಕುಪತ್ರಗಳನ್ನು ನೀಡಲು ಕ್ರಮ ವಹಿಸಲಾಗಿದೆ.

» ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ರಾಮನಗರ, ಚನ್ನಪಟ್ಟಣ, ಕನಕಪುರ, ಮಾಗಡಿ, ಕುಣಿಗಲ್ ಹಾಗೂ ಬಿಡದಿ ಪಟ್ಟಣಗಳಲ್ಲಿ 9,042 ಮನೆಗಳ ನಿರ್ಮಾಣ ಮಾಡಿ, ಅರ್ಹ ಫಲಾನುಭವಿಗಳಿಗೆ ಹಂಚಿಕೆಗೆ ಕ್ರಮ ವಹಿಸಲಾಗಿದೆ.

# ಅರಣ್ಯ

» ಕನಕಪುರ ತಾಲ್ಲೂಕಿನಲ್ಲಿ ಅರಣ್ಯ ಮತ್ತು ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ 'ಅರಣ್ಯ ಹಕ್ಕು ಕಾಯ್ದೆಯಡಿ' ಪಾರಂಪರಿಕ ಕೃಷಿಕರಿಗೆ ಜಮೀನಿನ ಹಕ್ಕು ಪತ್ರ ಕೊಡಿಸಲು ಕ್ರಮ ವಹಿಸಲಾಗಿದೆ.

» ಅರಣ್ಯ ಜಮೀನಿನಲ್ಲಿ 1976ರ ಪೂರ್ವದಿಂದಲೂ ವ್ಯವಸಾಯ ಮಾಡುತ್ತಿರುವ ರೈತರುಗಳಿಗೆ ಅರಣ್ಯ ಹಕ್ಕು ಕಾಯ್ದೆಯಡಿ ಕೆಳಕಂಡ ಜಮೀನುಗಳಿಗೆ ಭೂ ಮಂಜೂರಾತಿ ದೊರಕಿಸಿಕೊಡಲು ಕ್ರಮ ಕೈಗೊಳ್ಳಲಾಗಿದ್ದು, ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಐ.ಎ ದಾಖಲು ಮಾಡಿದ್ದು, ಅನುಮೋದನೆಯ ಹಂತದಲ್ಲಿರುತ್ತದೆ.



| ಕ್ರ ಸಂ | ತಾಲ್ಲೂಕು | ಅರಣ್ಯ ಪ್ರದೇಶ | ವಿಸ್ತೀರ್ಣ |
|---|---|---|---|
| 01 | ಚನ್ನಪಟ್ಟಣ | ದೊಡ್ಡಮಣ್ಣುಗುಡ್ಡೆ | 700 ಎಕರೆ |
| 02 | ಚನ್ನಪಟ್ಟಣ | ದೊಡ್ಡಮಣ್ಣುಗುಡ್ಡೆ | 500 ಎಕರೆ |
| 03 | ಕನಕಪುರ | ತೈಲೂರು ರಾಜ್ಯ ಅರಣ್ಯ | 280 ಎಕರೆ |
| 04 | ಚನ್ನಪಟ್ಟಣ | ಮಾಕಳಿ ರಾಜ್ಯ ಅರಣ್ಯ | 2380 ಎಕರೆ |
| 05 | ರಾಮನಗರ | ಹಂದಿಗುಂದಿ ರಾಜ್ಯ ಅರಣ್ಯ | 165 ಎಕರೆ |
| 06 | ಕನಕಪುರ | ಚೀಲಂದವಾಡಿ ರಾಜ್ಯ ಅರಣ್ಯ | 75.12 ಎಕರೆ |
| 07 | ಕನಕಪುರ | ಚೀಲಂದವಾಡಿ ರಾಜ್ಯ ಅರಣ್ಯ (ಕುಪ್ಪೆದೊಡ್ಡಿ ಬ್ಲಾಕ್) | 300 ಎಕರೆ |

ಇದಲ್ಲದೇ ಮುಂದಿನ ದಿನಗಳಲ್ಲಿ ಬಾಕಿ ಇರುವ ಪ್ರಸ್ತಾವನೆಗಳ ಸರ್ವೆ ಕಾರ್ಯ ಮುಕ್ತಾಯವಾಗಲಿದ್ದು, ಅರಣ್ಯ ಜಮೀನುಗಳ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.





» ಅಲೆಮಾರಿ ಬುಡಕಟ್ಟು ಜನಾಂಗಕ್ಕೆ ಸೇರಿದ ಹಕ್ಕಿ-ಪಿಕ್ಕಿ ಮತ್ತು ಇರುಳಿಗ ಸಮುದಾಯದ ರೈತರುಗಳಿಗೆ ಬನ್ನೇರುಘಟ್ಟ ವ್ಯಾಪ್ತಿಯ ರಾಗಿಹಳ್ಳಿ ರಾಜ್ಯ ಅರಣ್ಯದಲ್ಲಿ 350 ಎಕರೆ ಜಮೀನು ಮಂಜೂರು ಮಾಡಿಸಲಾಗಿದೆ.

» ಮಾನವ-ಪ್ರಾಣಿ ಸಂಘರ್ಷಗಳನ್ನು ತಪ್ಪಿಸಿ, ಅರಣ್ಯದಂಚಿನ ಗ್ರಾಮಗಳ ನಿವಾಸಿಗಳು ಹಾಗೂ ರೈತರುಗಳು ಎದುರಿಸುತ್ತಿರುವ ಕಾಡುಪ್ರಾಣಿಗಳ ಹಾವಳಿಯನ್ನು ತಡೆಗಟ್ಟುವ ಉದ್ದೇಶದಿಂದ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಿಂದ ಮುತ್ತತ್ತಿ ಅರಣ್ಯ ಪ್ರದೇಶದವರೆಗೆ ರೈಲ್ವೇ ಬ್ಯಾರಿಕೇಡ್ ನಿರ್ಮಾಣಕ್ಕೆ ವಿಶೇಷ ಅನುದಾನ 50 ಕೋಟಿ ರೂ. ಮಂಜೂರು ಮಾಡಿಸಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

# ಕ್ರೀಡೆ

ಕ್ರೀಡಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಅನುಕೂಲವಾಗುವಂತೆ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಬೇಗೂರು, ಕುಣಿಗಲ್ ಮತ್ತು ಕನಕಪುರ ಪಟ್ಟಣಗಳಲ್ಲಿ ತಲಾ 5 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಸುಸಜ್ಜಿತ ಕ್ರೀಡಾಂಗಣಗಳ ನಿರ್ಮಾಣ ಮಾಡಲಾಗಿದೆ.





ಕನಕಪುರ ತಾಲ್ಲೂಕು ಕೋಡಿಹಳ್ಳಿ ಗ್ರಾಮದಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ನೂತನ ಕ್ರೀಡಾಂಗಣ ನಿರ್ಮಾಣ ಮಾಡಲಾಗಿದೆ.



» ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಗ್ರಾಮೀಣ ಪ್ರತಿಭೆಗಳನ್ನು ಉತ್ತೇಜಿಸುವ ಸಲುವಾಗಿ ರಾಮನಗರದ ಜಿಲ್ಲಾ ಕ್ರೀಡಾಂಗಣವನ್ನು ಅಭಿವೃದ್ಧಿಗೊಳಿಸಲು ಮೊದಲ ಹಂತದಲ್ಲಿ 5 ಕೋಟಿ ರೂ. ಅನುದಾನ ಬಿಡುಗಡೆಗೊಳಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

» ಮಾಗಡಿ ಪಟ್ಟಣದ ಪದವಿ ಪೂರ್ವ ಕಾಲೇಜು ಆವರಣದಲ್ಲಿರುವ ಕುದೂರಿನ ಆಟದ ಮೈದಾನ ಅಭಿವೃದ್ಧಿಗೆ 2 ಕೋಟಿ ರೂ. ಅನುದಾನ ಮಂಜೂರು ಮಾಡಿಸಲಾಗಿದೆ.







» ಆನೇಕಲ್ ಪಟ್ಟಣದಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾಂಗಣ ಅಭಿವೃದ್ಧಿಗೊಳಿಸಿ, ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ಕ್ರಮ ಕೈಗೊಳ್ಳಲಾಗಿದೆ.

» ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಆನೇಕಲ್‌ನ ಇಂಡ್ಲವಾಡಿ ಸಮೀಪದ ಕರ್ನಾಟಕ ಗೃಹ ಮಂಡಳಿಯ ಸುಮಾರು 60 ಎಕರೆ ಪ್ರದೇಶದಲ್ಲಿ **"ಅಂತರಾಷ್ಟ್ರೀಯ ಕ್ರೀಡಾಂಗಣ"** ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಮಂಜೂರಾತಿ ಹಂತದಲ್ಲಿದೆ.

» ರಾಜರಾಜೇಶ್ವರಿನಗರ ಹಾಗೂ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಬಿ.ಡಿ.ಎ. ಹಾಗೂ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ಜಾಗದಲ್ಲಿ ಕ್ರೀಡಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಯೋಜನೆ ರೂಪಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಆದ್ಯತೆ ನೀಡಲಾಗುವುದು.

## ರೇಷ್ಮೆ

» ಇಡೀ ದೇಶದಲ್ಲಿಯೇ ರೇಷ್ಮೆ ನಾಡು ಎಂದೇ ಖ್ಯಾತಿಯನ್ನು ಪಡೆದಿರುವ ನಮ್ಮ ರಾಮನಗರ ರೇಷ್ಮೆ ಬೆಳೆಗಾರಿಗೆ ಬೆಂಬಲ ನೀಡಿ ಅವರಿಗೆ ಉತ್ತಮ ಮಾರುಕಟ್ಟೆಯನ್ನು ಕಲ್ಪಿಸುವ ಉದ್ದೇಶದೊಂದಿಗೆ ಚನ್ನಪಟ್ಟಣದ ವಂದಾರಗುಪ್ಪೆಯ ಹತ್ತಿರ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆ ನಿರ್ಮಾಣಕ್ಕೆ ಮೊದಲ ಹಂತದಲ್ಲಿ 75 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ. ಎರಡನೇ ಹಂತಕ್ಕೆ 125 ಕೋಟಿ ರೂ. ಅನುದಾನ ಮಂಜೂರಾತಿಯಾಗಿದೆ.

» ಕನಕಪುರದಲ್ಲಿ ರಾಜ್ಯ ಸರ್ಕಾರದ ಸಹಯೋಗದೊಂದಿಗೆ ರೇಷ್ಮೆ ಮಾರುಕಟ್ಟೆ ಕಟ್ಟಡವನ್ನು ಅಭಿವೃದ್ಧಿಪಡಿಸಲಾಗಿದೆ.



# ಕೋವಿಡ್ - 19

» ಕೋವಿಡ್ ಮಹಾಮಾರಿ ಸಂದರ್ಭದಲ್ಲಿ ಸುಮಾರು 10000 ಟನ್ ತರಕಾರಿ ಮತ್ತು ಹಣ್ಣುಗಳನ್ನು ರೈತರಿಂದ ನೇರವಾಗಿ ಸ್ವಂತ ಹಣದಲ್ಲಿ ಖರೀದಿಸಿ, ಕ್ಷೇತ್ರದ ಪ್ರತಿ ಮನೆಗೂ ತಲುಪಿಸಲಾಯಿತು.

» ಕೊರೊನಾ ಸೋಂಕಿನ ಸಂದರ್ಭದಲ್ಲಿ ಸಮಯಕ್ಕೆ ಸರಿಯಾಗಿ ಸೋಂಕಿತರಿಗೆ ಆಕ್ಸಿಜನ್ ವ್ಯವಸ್ಥೆ, ಮೆಡಿಕಲ್ ಕಿಟ್ ಹಾಗೂ ರೆಮ್ಡಿಸಿವಿರ್ ಇಂಜೆಕ್ಷನ್ ಒದಗಿಸಲು ಸಹಾಯ ಮಾಡಿದೆ.

» ಆಸ್ಪತ್ರೆಗಳ ಭೇಟಿ ಹಾಗೂ ಸೊಂಕಿತರಿಗೆ ಧೈರ್ಯ ಹೇಳುವ ಮೂಲಕ ಆತ್ಮಸ್ಥೈರ್ಯ ತುಂಬಲಾಗಿದೆ.

» ಮೃತಪಟ್ಟವರಿಗೆ ಗೌರವಾನ್ವಿತವಾಗಿ ಅಂತಿಮ ವಿಧಿ ವಿಧಾನಗಳೊಂದಿಗೆ ಗೌರವ ಬೀಳ್ಕೊಡುಗೆ.

















**ಕಳೆದ 10 ವರ್ಷಗಳಲ್ಲಿ ನಗರ ಪ್ರದೇಶದ ವಾರ್ಡ್ ಮಟ್ಟ ಹಾಗೂ ಗ್ರಾಮೀಣ ಪ್ರದೇಶದ ಗ್ರಾಮ ಪಂಚಾಯತಿ ಮಟ್ಟದಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸಿ, ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಸ್ಥಳದಲ್ಲಿಯೇ ಪರಿಹಾರ ದೊರಕಿಸಲಾಗಿದೆ. ಹಂತ ಹಂತವಾಗಿ ಸಮಸ್ಯೆಗಳನ್ನು ಬಗೆಹರಿಸುವ ಮೂಲಕ ಜನರ ಆಶೋತ್ತರಗಳಿಗೆ ಸ್ಪಂದಿಸಲಾಗುತ್ತಿದೆ.**

# 10 ವರ್ಷ 8 ತಿಂಗಳ ಅವಧಿ ಸಾಧನೆಯ ಹಾದಿ

**300ಕ್ಕೂ ಹೆಚ್ಚು**
ಕುಡಿಯುವ ನೀರಿನ ಘಟಕಗಳ ನಿರ್ಮಾಣ

**1,00,000ಕ್ಕೂ ಹೆಚ್ಚು**
ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಯುಎನ್‌ಐಪಿ ಮತ್ತು ಹೆಚ್‌ವಿಡಿಎಸ್ ಯೋಜನೆಯಡಿ ಅಳವಡಿಕೆ ಮಾಡಲಾಗಿದೆ.

**3,094**
ಕೆರೆ ಮತ್ತು ಗೋಕಟ್ಟೆ ಅಭಿವೃದ್ಧಿ

**9,001**
ಚರಂಡಿ ನಿರ್ಮಾಣ

**75,304**
ದನದ ಕೊಟ್ಟಿಗೆ

**4,045**
ಕೋಳಿ ಶೆಡ್ಡು

**45,283**
ಬದು ನಿರ್ಮಾಣ

ಅತ್ಯಾಧುನಿಕ ವಿಶೇಷ ವಿನ್ಯಾಸದ ಸುಸಜ್ಜಿತ ಬಸ್ ನಿಲ್ದಾಣ
**80**

ಡಿ.ಕೆ.ಎಸ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಹಿರಿಯ ನಾಗರಿಕರಿಗೆ ಸರ್ಕಾರಿ ಸೌಲಭ್ಯ ಒದಗಿಸಲಾಗಿದೆ
**26,668**

ಕಲ್ಯಾಣಿ ಅಭಿವೃದ್ಧಿ
**617**

ಚೆಕ್ ಡ್ಯಾಮ್
**3,012**

ಆಟದ ಮೈದಾನ
**785**

ಕುರಿ ಶೆಡ್ಡು
**6,667**

ಕೃಷಿ ಹೊಂಡ
**27,928**














ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದನಾಗಿ ಕಳೆದ 10 ವರ್ಷ 8 ತಿಂಗಳ ಅವಧಿಯಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ಕ್ಷೇತ್ರದ ಜನರು ನೀಡುತ್ತಿರುವ ಪ್ರೋತ್ಸಾಹ, ಅಭಿಮಾನ, ಬೆಂಬಲಕ್ಕೆ ಸದಾ ಚಿರಋಣಿ. ಕ್ಷೇತ್ರದ ಪ್ರಗತಿಗಾಗಿ ಹಗಲಿರುಳು ಶ್ರಮಿಸಿದ್ದೇನೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ನಾನು ಕಾತುರನಿದ್ದೇನೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಾದ್ಯಂತ ಗ್ರಾಮೀಣ ಭಾಗದಲ್ಲಿ ವಿಶ್ವದರ್ಜೆಯ ಗುಣಮಟ್ಟದ ಆರೋಗ್ಯ ವ್ಯವಸ್ಥೆ ಕಲ್ಪಿಸುವುದು, ಸಿ.ಎಸ್.ಆರ್ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲೂ ಮಾದರಿ ಶಾಲೆಗಳನ್ನು ನಿರ್ಮಿಸುವುದು ಸೇರಿದಂತೆ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸಲು ನಾನು ಕಟಿಬದ್ಧನಿದ್ದೇನೆ. 2024ರ ಲೋಕಸಭಾ ಚುನಾವಣೆಯಲ್ಲಿ ನಿಮ್ಮ ಮನೆಮಗನಿಗೆ ಆಶೀರ್ವದಿಸುವ ಮೂಲಕ ನನ್ನನ್ನು ವಿಜಯಶಾಲಿಯನ್ನಾಗಿ ಮಾಡಬೇಕೆಂದು ವಿನಂತಿಸಿಕೊಳ್ಳುತ್ತೇನೆ.

ಜೈ ಹಿಂದ್, ಜೈ ಕರ್ನಾಟಕ
ಇಂತಿ ನಿಮ್ಮ ಸೇವಾಕಾಂಕ್ಷಿ,

**ಡಿ.ಕೆ.ಸುರೇಶ್**


# “ ಕ್ಷೇತ್ರದ ಅಭಿವೃದ್ಧಿಯೇ ನನ್ನ ಮೂಲಮಂತ್ರ ”

ಕನ್ನಡಿಗರ ಹೆಮ್ಮೆ
ಡಿ ಕೆ ಸುರೇಶ್
ಮತ್ತೊಮ್ಮೆ

ಅಭಿವೃದ್ಧಿ ಕಾರ್ಯಗಳ ಹೆಚ್ಚಿನ ಮಾಹಿತಿಯನ್ನು ತಿಳಿಯಲು ದಯವಿಟ್ಟು QR ಕೋಡ್ ಸ್ಕ್ಯಾನ್ ಮಾಡಿ.

## ಡಿ.ಕೆ. ಸುರೇಶ್

ಲೋಕಸಭಾ ಸದಸ್ಯರು, ಬೆಂಗಳೂರು ಗ್ರಾಮಾಂತರ ಕ್ಷೇತ್ರ



DKSureshINC dksureshofficial dksureshkarnataka.com